# Akashvani : Bangalore
# National Bulletin In Kannada
# 03.04.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.04.2024 / 19.35 hrs**

*********************

ಮುಖ್ಯಾಂಶಗಳು

1. 2024ರ ಸಾರ್ವತ್ರಿಕ ಚುನಾವಣೆ; ಕಾನೂನು ಸುವ್ಯವಸ್ಥೆ ಕಾಪಾಡಿಕೊಂಡು ಬರುವಂತೆ ಮುಖ್ಯ ಕಾರ್ಯದರ್ಶಿ, ಡಿಜಿಪಿಗಳಿಗೆ ಕೇಂದ್ರ ಚುನಾವಣಾ ಆಯೋಗ ನಿರ್ದೇಶನ
2. ಎರಡನೇ ಹಂತದ 88 ಕ್ಷೇತ್ರಗಳಿಗೆ ನಾಳೆ ನಾಮಪತ್ರ ಸಲ್ಲಿಸಲು ಕೊನೆಯ ದಿನ; 12 ರಾಜ್ಯಗಳಲ್ಲಿ ನಾಮಪತ್ರಗಳ ಸುರಿಮಳೆ
3. ರಾಜ್ಯಸಭೆಯ ಹಿರಿಯ ಮುಖಂಡ ಡಾ.ಮನಮೋಹನ್ ಸಿಂಗ್ ಸೇರಿದಂತೆ 56 ಮಂದಿ ನಿವೃತ್ತಿ; 11 ಹೊಸ ಸದಸ್ಯರ ಪ್ರಮಾಣ ವಚನ
4. ತೈವಾನ್‌ದಲ್ಲಿ ಭಾರೀ ಭೂಕಂಪ; 7 ಮಂದಿ ಸಾವು, 700ಕ್ಕೂ ಹೆಚ್ಚು ಮಂದಿಗೆ ಗಾಯ

*********************

ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ದೇಶಾದ್ಯಂತ ಕಾನೂನು ಸುವ್ಯವಸ್ಥೆ ಕಾಪಾಡಿಕೊಂಡು ಬರುವ ಕುರಿತಂತೆ ಎಲ್ಲ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿ ಹಾಗೂ ಪೊಲೀಸ್ ಮಹಾ ನಿರ್ದೇಶಕರಿಗೆ ಚುನಾವಣಾ ಆಯೋಗ ನಿರ್ದೇಶನ ನೀಡಿತು.

ದೆಹಲಿಯಲ್ಲಿಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ನೇತೃತ್ವದಲ್ಲಿ ಪೂರ್ಣತಂಡ ಸಂವಾದ ನಡೆಸಿ ನ್ಯಾಯಸಮ್ಮತ, ಶಾಂತಿಯುತ, ಮುಕ್ತ ಮತದಾನಕ್ಕೆ ಅವಕಾಶ ಕಲ್ಪಿಸಲು ಪೊಲೀಸ್ ಅಧಿಕಾರಿಗಳಿಗೆ ಹಿರಿಯ ಅಧಿಕಾರಿಗಳು ಸೂಚನೆ ನೀಡಬೇಕು ಎಂದು ಅವರು ತಿಳಿಸಿದರು.

ಎಲ್ಲ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳಲ್ಲಿ ನೇಮಕಗೊಂಡಿರುವ ವಿಶೇಷ ವೀಕ್ಷಕರುಗಳೊಂದಿಗೆ ಕೇಂದ್ರ ಚುನಾವಣಾ ಆಯೋಗ ಮಾತುಕತೆ ನಡೆಸಿ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಯ ಸಮಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಕಾಪಾಡಿಕೊಂಡು ಬರುವಂತೆ ವೀಕ್ಷಕರಿಗೆ ನಿರ್ದೇಶನ ನೀಡಿದರು.

ದೇಶದ ಗಡಿಭಾಗದಲ್ಲಿಯೂ ಸಹ ಹಾಗೂ ಅಂತಾರಾಜ್ಯದ ಗಡಿಯಲ್ಲಿಯೂ ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಅಧಿಕಾರಿಗಳಿಗೆ ಆಯೋಗ ಆದೇಶ ನೀಡಿತು ಎಂದು ಮೂಲಗಳು ತಿಳಿಸಿವೆ.

ಪಶ್ಚಿಮ ಬಂಗಾಳ, ಉತ್ತರಪ್ರದೇಶ, ಒಡಿಶಾ, ಮಹಾರಾಷ್ಟ್ರ, ಬಿಹಾರ, ಮತ್ತು ಆಂಧ್ರಪ್ರದೇಶ ರಾಜ್ಯಗಳ ಲೋಕಸಭೆ ಹಾಗೂ ಆಂಧ್ರಪ್ರದೇಶ ಒಡಿಶಾ ರಾಜ್ಯಗಳ ವಿಧಾನಸಭೆಗೂ ಚುನಾವಣೆ ನಡೆಯುತ್ತಿದ್ದು, ಸುಗಮ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಕಾನೂನು ಸುವ್ಯವಸ್ಥೆ ಕಾಪಾಡಿಕೊಂಡು ಬರುವ ಬಗ್ಗೆ ಆಯೋಗ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿತು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

ಚುನಾವಣಾ ಆಯೋಗ ಈಗಾಗಲೇ ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು, ಉತ್ತರಪ್ರದೇಶ ಹಾಗೂ ಒಡಿಶಾ ರಾಜ್ಯಗಳಲ್ಲಿ ಅಕ್ರಮವಾಗಿ ಹಣ ಸಾಗಾಣಿಕೆ ಮೇಲೆ ನಿಗಾ ಇಡುವುದರ ಜೊತಗೆ ವೆಚ್ಚ ವೀಕ್ಷಕರು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಎಂದು ನಿರ್ದೇಶನ ನೀಡಿದರು ಎಂದು ಮೂಲಗಳನ್ನುಲ್ಲೇಖಿಸಿ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

ಈಗಾಗಲೇ ಈ ಎಲ್ಲ ರಾಜ್ಯಗಳಲ್ಲಿ ನೇಮಕಗೊಂಡಿರುವ ವಿಶೇಷ ವೀಕ್ಷಕರು ಹಾಗೂ ವೆಚ್ಚ ವೀಕ್ಷಕರು ಕಟ್ಟುನಿಟ್ಟಿನ ನಿಗಾ ವಹಿಸಿದ್ದು, ಇನ್ನಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳುವಂತೆ ಆದೇಶಿಸಿದರು ಎಂದು ವರದಿಯಾಗಿದೆ.

ಇದೇ ಸಂದರ್ಭದಲ್ಲಿ ಭಾರತೀಯ ವಾಯುಪಡೆ ಮತ್ತು ನಾಗರಿಕ ವಿಮಾನ ಇಲಾಖೆಯ ತಂಡಗಳ ಜೊತೆಯೂ ಸಮಾಲೋಚನೆ ನಡೆಸಿದ ಕೇಂದ್ರ ಚುನಾವಣಾ ಆಯೋಗ ಎಲ್ಲ ರೀತಿಯ ಭದ್ರತೆಯನ್ನು ಕೈಗೊಳ್ಳಬೇಕು ಎಂದು ಸೂಚಿಸಿತು.

*********************

2024ರ ಲೋಕಸಭೆ ಚುನಾವಣೆಯ ಎರಡನೇ ಹಂತದ ನಾಮಪತ್ರ ಸಲ್ಲಿಕೆಗೆ ನಾಳೆ ಕೊನೆಯ ದಿನವಾಗಿರುವ ಹಿನ್ನೆಲೆಯಲ್ಲಿ ದೇಶಾದ್ಯಂತ 88 ಕ್ಷೇತ್ರಗಳಲ್ಲಿ ಇಂದೂ ಸಹ ರಾಜಕೀಯಪಕ್ಷಗಳ ಅಭ್ಯರ್ಥಿಗಳು, ಪ್ರಾದೇಶಿಕ ಪಕ್ಷಗಳ ಅಭ್ಯರ್ಥಿಗಳು, ಪಕ್ಷೇತರರು ನಾಮಪತ್ರ ಸಲ್ಲಿಸಿದರು ಎಂದು ವರದಿಯಾಗಿದೆ.

ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಕೇರಳದ ವೈಯನಾಡು ಕ್ಷೇತ್ರದಿಂದ ಪುನರಾಯ್ಕೆ ಬಯಸಿ ತಮ್ಮ ನಾಮಪತ್ರವನ್ನು ಸಲ್ಲಿಸಿದರು. ಅವರೊಂದಿಗೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು. ವೈನಾಡು ಕ್ಷೇತ್ರದಿಂದ ಎಲ್‌ಡಿಎಫ್ ಅಭ್ಯರ್ಥಿ ಅನ್ನಿ ರಾಜಾ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಕೇರಳದ 12 ಕ್ಷೇತ್ರಗಳಲ್ಲಿ ನಾಳೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ನಾಡಿದ್ದು, ನಾಮಪತ್ರ ಪರಿಶೀಲನೆ ನಡೆಯಲಿದ್ದು, ನಾಮಪತ್ರ ವಾಪಸ್ ಪಡೆಯಲು ಇದೇ ತಿಂಗಳ 8 ರಂದು ಕೊನೆಯ ದಿನ. ಏಪ್ರಿಲ್ 26 ರಂದು ಮತದಾನ ನಡೆಯಲಿದೆ.

*********************

ಲೋಕಸಭಾ ಚುನಾವಣೆಯ ರಾಜ್ಯದ ಮೊದಲ ಹಂತದಲ್ಲಿ ರಾಜ್ಯದ 14 ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಸಲು ನಾಳೆ ಕಡೆಯ ದಿನ, ಇಂದು ವಿವಿಧ ರಾಜಕೀಯ ಪಕ್ಷಗಳ ಹಾಗೂ ಸ್ವತಂತ್ರ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಆಗಿವೆ ಎಂದು ವರದಿಯಾಗಿದೆ.

ಉಮೇದುವಾರಿಕೆ ಸಲ್ಲಿಸಿದವರಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಕೋಟ ಶ್ರೀನಿವಾಸ ಪೂಜಾರಿ, ಮೈಸೂರು ರಾಜ ವಂಶಸ್ಥ ಯದುವೀರ್ ಕೃಷ್ಣರಾಜದತ್ತ ಒಡೆಯರ್, ಮಾಜಿ ಸಚಿವ ವಿ.ಸೋಮಣ್ಣ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ಬೆಂಗಳೂರು ಉತ್ತರ ಲೋಕಷಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೋ. ಎಂ.ವಿ. ರಾಜೀವ್ ಗೌಡ ಪ್ರಮುಖರಾಗಿದ್ದಾರೆ.

**ತುಮಕೂರು ಲೋಕಸಭಾ ಕ್ಷೇತ್ರ** ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ರೋಡ್ ಶೋ ನಡೆಸಿದ ಬಳಿಕ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ

ಎಸ್. ಬಾಲರಾಜ್, ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರು ನಾಮಪತ್ರ ಸಲ್ಲಿಸಿದರು. ಉಡುಪಿ– ಚಿಕ್ಕಮಗಳೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ ಅವರು ತಮ್ಮ ನಾಮಪತ್ರ ಸಲ್ಲಿಸಿದರು.

**ಮೈಸೂರು ಕ್ಷೇತ್ರದ ಕಾಂಗ್ರೆಸ್** ಅಭ್ಯರ್ಥಿ ಲಕ್ಷ್ಮಣ್ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

**********************

2024ರ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳ ನಾಯಕರು ತಮ್ಮ ಅಭ್ಯರ್ಥಿ ಪರ ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ. ಬಿಜೆಪಿ ಹಿರಿಯ ಧುರೀಣ, ಪ್ರಧಾನಿ ನರೇಂದ್ರ ಮೋದಿ ಅವರು, ಪಕ್ಷದ ಮುಖಂಡರ ಜೊತೆ ನಮೋ ಆ್ಯಪ್ ಮೂಲಕ ರ‍್ಯಾಲಿ ನಡೆಸಿ, ಕಾರ್ಯಕರ್ತರನ್ನು ಉದ್ದೇಶಿಸಿ ಭಾಷಣ ಮಾಡಿದರು.

ಉತ್ತರ ಪ್ರದೇಶ ಹಲವು ಕ್ಷೇತ್ರಗಳ ಬೂತ್ ಮಟ್ಟದಲ್ಲಿ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದರು. ಈ ಭಾಗದ ಒಟ್ಟು 22 ಸಾವಿರದ 648 ಮತಗಟ್ಟೆಗಳ ಪ್ರತಿನಿಧಿಗಳೊಂದಿಗೆ ಮಾತನಾಡಿ, 10 ವರ್ಷದ ತಮ್ಮ ಸರ್ಕಾರದ ಸಾಧನೆಯನ್ನು ಜನತೆಗೆ ತಲುಪಿಸುವಂತೆ ಮನವಿ ಮಾಡಿದರು.

ಈ ಮಧ್ಯೆ ಬಿಜೆಪಿ ಇನ್ನೋರ್ವ ನಾಯಕ ರಾಜನಾಥ್ ಸಿಂಗ್ ಅವರು ಸಹ ಗೌತಮ್ ಬುದ್ಧ ನಗರ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿಯ ಪರವಾಗಿ ಮತಯಾಚಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದೆಹಲಿಯ ಈಶಾನ್ಯ ಸಂಸದ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿಯ ಪರವಾಗಿ ಪ್ರಚಾರ ಕೈಗೊಂಡು ಗ್ಯಾರಂಟಿ ಯೋಜನೆ ಅನುಷ್ಠಾನದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಕಾಂಗ್ರೆಸ್ 5 ಪ್ರಮುಖ ಖಾತರಿಯೊಂದಿಗೆ 25 ಗ್ಯಾರಂಟಿ ಕಾರ್ಯಕ್ರಮಗಳನ್ನು ಜಾರಿಗೆ ತರಲಿದೆ ಎಂದು ಪ್ರಚಾರ ಭಾಷಣದಲ್ಲಿ ತಿಳಿಸಿದರು.

**********************

ರಾಜ್ಯಸಭೆಗೆ ಪುನರಾಯ್ಕೆಯಾಗಿರುವ ಕೇಂದ್ರ ಸಚಿವ ಡಾ. ಎಲ್. ಮುರುಗನ್ ಸೇರಿದಂತೆ 11 ಸದಸ್ಯರು ಇಂದು ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಸಭೆಯ ಸಭಾಪತಿಯೂ ಆಗಿರುವ

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ನೂತನ ಸದಸ್ಯರಿಗೆ ಪ್ರಮಾಣವಚನ ಹಾಗೂ ಗೌಪ್ಯತೆಯನ್ನು ಬೋಧಿಸಿದರು.

ಪ್ರೋ. ಮನೋಜ್ ಝಾ, ಧರ್ಮಶೀಲಾ ಗುಪ್ತಾ, ಸಂಜಯ್ ಯಾದವ್, ಹರ್ಷ ಮಹಜನ್, ಸುಭಾಷ್ ಚಂದರ್, ಮೇಧಾ ಕುಲಕರ್ಣಿ, ಚಂದ್ರಕಾಂತ್ ಹ್ಯಾಂಡೋರ್, ಜಿ.ಸಿ. ಚಂದ್ರಶೇಖರ್, ಗೋವಿಂದಬಾಯ್ ಧೋಲಾಕಿಯಾ, ಸಾಧನಾ ಸಿಂಗ್, ಅಶೋಕ್ ಸಿಂಗ್ ಅವರು ಪ್ರಮಾಣವಚನ ಸ್ವೀಕರಿಸಿದ ಸದಸ್ಯರು. ರಾಜ್ಯ ಸಭೆಯ 56 ಸದಸ್ಯರು ಇಂದು ಸೇವೆಯಿಂದ ನಿವೃತ್ತಿಯಾದರು.

ಮಾಜಿ ಪ್ರಧಾನಿ ಡಾ. ಮನ್‌ಮೋಹನ್ ಸಿಂಗ್ ಸೇರಿದಂತೆ 56 ಸದಸ್ಯರು ಸೇವೆಯಿಂದ ನಿವೃತ್ತಿ ಹೊಂದಿದರು. ಇದರಲ್ಲಿ ಹಲವು ಮಂದಿ ಪುನರಾಯ್ಕೆಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಕರ್ನಾಟಕದ ಜಿ.ಸಿ ಚಂದ್ರಶೇಖರ್ ಅವರು ಸಹ ಪುನರಾಯ್ಕೆಯಾಗಿರುವುದು ವಿಶೇಷ.

*********************

ದೇಶದ ವಿವಿಧ ಭಾಗಗಳಲ್ಲಿ ಬೇಸಿಗೆ ಸಮಯದಲ್ಲಿ ತಾಪಮಾನ ಗಣನೀಯವಾಗಿ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಆರೋಗ್ಯ ಸಚಿವಾಲಯದಲ್ಲಿ ತಾಪಮಾನ ಏರಿಕೆಯಿಂದ ಉಂಟಾಗುವ ಪರಿಣಾಮ ಬಗ್ಗೆ ಪರಾಮರ್ಶೆ ನಡೆಯಿತು ಎಂದು ಮೂಲಗಳು ತಿಳಿಸಿವೆ.

ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಆರೋಗ್ಯ ಸಚಿವ ಮನ್ಸುಖ್ ಮಾಂಡವೀಯ ಗ್ರಾಮೀಣ ಭಾಗದ ಜನತೆ, ಕಟ್ಟಡ ಕಾರ್ಮಿಕರು ಸೇರಿದಂತೆ ಚುನಾವಣಾ ಕಾರ್ಯದಲ್ಲಿ ಪಾಲ್ಗೊಂಡಿರುವ ಸಿಬ್ಬಂದಿ, ರಾಜಕೀಯ ಪಕ್ಷಗಳ ಜೊತೆ ಪ್ರಚಾರದಲ್ಲಿ ಪಾಲ್ಗೊಂಡಿರುವ ಕಾರ್ಯಕರ್ತರು ಎಲ್ಲ ರೀತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಜಿಲ್ಲಾಡಳಿತ ಅಗತ್ಯ ಚಿಕಿತ್ಸೆಗೆ ಸಿದ್ಧತೆ ಮಾಡಿಕೊಳ್ಳುವಂತೆ ನಿರ್ದೇಶನ ನೀಡಿರುವ ಕೇಂದ್ರ ಸಚಿವರು ಆಯುಷ್ಮಾನ್ ಆರೋಗ್ಯ ಮಂದಿರಗಳನ್ನು ಸನ್ನದ್ಧುಗೊಳಿಸುವಂತೆ ರಾಜ್ಯ ಸರ್ಕಾರಗಳಿಗೆ ಸೂಚಿಸಿದರು.

ಕೆಲವು ಚಿಕಿತ್ಸೆಗಳಿಂದ ತೊಂದರೆ ಅನುಭವಿಸುತ್ತಿರುವ ಹಿರಿಯ ನಾಗರಿಕರು ಬಿಸಿಲಿನ ವೇಳೆಯಲ್ಲಿ ಮನೆಯಿಂದ ಹೊರಗೆ ಬರದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪೋಷಕರಲ್ಲಿ ಮನವಿ ಮಾಡಿದರು.

*********************

ತೈವಾನ್ ನ ಪೂರ್ವ ತೀರದಲ್ಲಿ ಇಂದು ರಿಕ್ಟರ್ ಮಾಪಕದಲ್ಲಿ 7.4 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದೆ. ಈ ಅವಗಢದಲ್ಲಿ ನಾಲ್ಕು ಜನ ಮೃತಪಟ್ಟಿದ್ದು, 60 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಈ ಪ್ರದೇಶದಲ್ಲಿ ಸುನಾಮಿ ಎಚ್ಚರಿಕೆ ನೀಡಲಾಗಿದೆ.

ಅಮೆರಿಕದ ಭೂವೈಜ್ಞಾನಿಕ ಸಮೀಕ್ಷೆ ಪ್ರಕಾರ, ಭೂಕಂಪದ ಕೇಂದ್ರಬಿಂದು 7.4 ರಷ್ಟಿತ್ತು, ಅದರ ಕೇಂದ್ರಬಿಂದು ತೈವಾನ್ ನ  ಹುವಾಲಿಯನ್ ನಗರದ ದಕ್ಷಿಣಕ್ಕೆ 18 ಕಿಲೋಮೀಟರ್ ದೂರದಲ್ಲಿ 34.8 ಕಿ.ಮೀ ಆಳದಲ್ಲಿತ್ತು.ತೈವಾನ್ ಮತ್ತು ಕಡಲಾಚೆಯ ದ್ವೀಪದಾದ್ಯಂತ ಭೂಕಂಪನದ ಅನುಭವವಾಗಿದ್ದು, ಇದು ಕಳೆದ 25 ವರ್ಷಗಳಲ್ಲಿ ಅತ್ಯಂತ ಪ್ರಬಲವಾಗಿದೆ ಎಂದು ತೈಪೆಯ ಭೂಕಂಪಶಾಸ್ತ್ರ ಕೇಂದ್ರದ ನಿರ್ದೇಶಕ ವು ಚಿಯೆನ್ ಫು ಹೇಳಿದ್ದಾರೆ.

ಈ ಕಂಪನವು ದಕ್ಷಿಣ ಜಪಾನ್‌ನಲ್ಲಿಯೂ ಸುನಾಮಿ ಎಚ್ಚರಿಕೆ ಉಂಟುಮಾಡಿತು. ವರದಿಗಳ ಪ್ರಕಾರ, ಯೋನಾಗುನಿ ದ್ವೀಪದಲ್ಲಿ ಬೆಳಿಗ್ಗೆ 9:18 ರ ಸುಮಾರಿಗೆ 30–ಸೆಂಟಿಮೀಟರ್ ಸುನಾಮಿ ದಾಖಲಾಗಿದೆ. ಜಪಾನ್ ಹವಾಮಾನ ಇಲಾಖೆ ಮಿಯಾಕೋಜಿಮಾ ಮತ್ತು ಒಕಿನಾವಾ ದ್ವೀಪಗಳಿಗೆ ಎಚ್ಚರಿಕೆ ನೀಡಿದೆ. ಫಿಲಿಪೈನ್ಸ್‌ನ ಭೂಕಂಪ ಶಾಸ್ತ್ರ ಸಂಸ್ಥೆ ಕೂಡ ಸುನಾಮಿ ಎಚ್ಚರಿಕೆ ನೀಡಿದೆ. ಚೀನಾದ ಆಗ್ನೇಯ ಫುಜಿಯಾನ್ ಪ್ರಾಂತ್ಯದ ಕೆಲವು ಭಾಗಗಳಲ್ಲಿ ಕಂಪನದ ಅನುಭವವಾಗಿದೆ ಎಂದು ಚೀನಾದ ಮಾಧ್ಯಮ ಪ್ರಕಟಣೆ ತಿಳಿಸಿದೆ.

ಭಾರತ ತೈಪೆ ಅಸೋಸಿಯೇಷನ್ ತೈವಾನ್‌ನಲ್ಲಿ ಭೂಕಂಪದ ಕುರಿತು ಯಾವುದೇ ಸಹಾಯ ಮತ್ತು ಹೆಚ್ಚಿನ ಮಾಹಿತಿ ಪಡೆಯಲು ತುರ್ತು ಸಹಾಯವಾಣಿ ಸಂಖ್ಯೆಗಳನ್ನು ನೀಡಿದೆ. ದೂರವಾಣಿ ಸಂಖ್ಯೆ 09052–47906 ಮತ್ತು ಇಮೇಲ್ ಐಡಿ ad.ita@mea.gov.in ಆಗಿದೆ. ತೈವಾನ್‌ನಲ್ಲಿ ವಾಸಿಸುವ ಭಾರತೀಯ ಪ್ರಜೆಗಳಿಗೆ ಸ್ಥಳೀಯ ಅಧಿಕಾರಿಗಳು ನೀಡುವ ಸಲಹೆಗಳನ್ನು ಅನುಸರಿಸಲು ಅಸೋಸಿಯೇಷನ್ ವಿನಂತಿಸಿದೆ.

**********ಮುಕ್ತಾಯ*********